# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 200 |
| ಸದಸ್ಯರ ಹೆಸರು | : | ಡಾ\|\|ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 10.12.2024 |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | 2023-24ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ಪ್ರವಾಸೋದ್ಯಮ ಮತ್ತು ಉದ್ಯಮ ವಲಯಗಳನ್ನು ಉತ್ತೇಜಿಸಲು ಹಾಗೂ ವಿಪತ್ತು ನಿರ್ವಹಣೆಯ ಸಮಯದಲ್ಲಿ ರಕ್ಷಣಾ ಕಾರ್ಯಗಳಿಗೆ ನೆರವಾಗುವ ಉದ್ದೇಶದಿಂದ ಧರ್ಮಸ್ಥಳ, ಕೊಡಗು ಮತ್ತು ಚಿಕ್ಕಮಗಳೂರಿನ ಹೊಸ ಏರ್‌ಸ್ಟ್ರಿಪ್‌ಗಳನ್ನು ಅಭಿವೃದ್ಧಿಪಡಿಸುವ ಯೋಜನೆಯು ಯಾವ ಹಂತದಲ್ಲಿದೆ; | ಕೊಡಗು, ಚಿಕ್ಕಮಗಳೂರು ಮತ್ತು ಧರ್ಮಸ್ಥಳಗಳಲ್ಲಿ ಏರ್‌ಸ್ಟ್ರಿಪ್ ಅಭಿವೃದ್ಧಿಪಡಿಸಲು 2023-24ನೇ ಸಾಲಿನ ಆಯವ್ಯಯದಲ್ಲಿ ಘೋಷಣೆಯಾಗಿರುತ್ತದೆ. ಏರ್‌ಸ್ಟ್ರಿಪ್ ಅಭಿವೃದ್ಧಿಪಡಿಸಲು ಕನಿಷ್ಠ 140 ಎಕರೆ ಜಮೀನು ಅವಶ್ಯವಿದೆ.<br><br>**1. ಚಿಕ್ಕಮಗಳೂರು ಏರ್‌ಸ್ಟ್ರಿಪ್**<br><br>ಜಿಲ್ಲಾಡಳಿತವು ಸುಮಾರು 140 ಎಕರೆ ಜಮೀನುಗಳನ್ನು ಗುರುತಿಸಲಾಗಿರುತ್ತದೆ. ಇದರಲ್ಲಿ ಸರ್ಕಾರಿ ಜಮೀನು 120.22 ಎಕರೆ – ಬಾಕಿ 17.01 ಎಕರೆ ಖಾಸಗಿ ಜಮೀನಾಗಿರುತ್ತದೆ. ಸದರಿ ಖಾಸಗಿ ಜಮೀನನ್ನು ಜಿಲ್ಲಾಧಿಕಾರಿಗಳಿಂದ ಭೂ-ಸ್ವಾಧೀನಪಡಿಸಿಕೊಳ್ಳಲು ಈಗಾಗಲೇ ರೂ 7.00 ಕೋಟಿ ಬಿಡುಗಡೆ ಮಾಡಲಾಗಿದ್ದು, ಉಳಿದ ರೂ.17.06 ಕೋಟಿ ಅನುದಾನ ಬಿಡುಗಡೆ ಮಡುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. ಭೂ-ಸ್ವಾಧೀನ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಜಿಲ್ಲಾಡಳಿತವನ್ನು ಕೋರಲಾಗಿದೆ.<br><br>**2. ಕೊಡಗು ಏರ್‌ಸ್ಟ್ರಿಪ್**<br><br>ಏರ್‌ಸ್ಟ್ರಿಪ್‌ನ ಅಭಿವೃದ್ಧಿಗೆ ಕನಿಷ್ಠ 140 ಎಕರೆ ಭೂಮಿ ಅಗತ್ಯವಿದೆ. ಅವಶ್ಯವಿರುವ ಸ್ಥಳಗಳನ್ನು ಗುರುತಿಸುವಂತೆ ದಿನಾಂಕ:30.09.2023, 18.11.2023 ಮತ್ತು 03.09.2024 ರಂದು ಜಿಲ್ಲಾಡಳಿತವನ್ನು ಕೋರಲಾಗಿತ್ತು. ಜಿಲ್ಲಾಡಳಿತವು ಸುಮಾರು 161 ಎಕರೆ (ಕುಶಾಲನಗರದ ಅಂದಾನಿಪುರ, ತೊರೆನೂರು & 6ನೇ ಹೊಸಕೋಟೆ ಗ್ರಾಮಗಳಲ್ಲಿ) ಜಮಿನುಗಳನ್ನು ಗುರುತಿಸಿದ್ದು, ಸದರಿ ಜಮೀನುಗಳನ್ನು KSIIDC ತಾಂತ್ರಿಕ ತಂಡವು ಪರಿಶೀಲನೆ ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ.<br><br>**3. ಧರ್ಮಸ್ಥಳ ಏರ್‌ಸ್ಟ್ರಿಪ್**<br><br>ಏರ್‌ಸ್ಟ್ರಿಪ್ ಅಭಿವೃದ್ಧಿಗೆ ಕನಿಷ್ಠ 140 ಎಕರೆ ಜಮೀನು ಅಗತ್ಯವಿದ್ದು, ಈಗಾಗಲೇ ಜಿಲ್ಲಾಡಳಿತವು ಗುರುತಿಸಿದ್ದ, ಕಲ್ಮಂಜ ಮತ್ತು ಲೈಲಾ ಗ್ರಾಮಗಳಲ್ಲಿನ ಜಮೀನುಗಳನ್ನು ನಿಗಮದ ತಾಂತ್ರಿಕ ತಂಡವು ಪರಿಶೀಲನೆ ನಡೆಸಿದ್ದು, ಏರ್‌ಸ್ಟ್ರಿಪ್ ನಿರ್ಮಾಣ ಮಾಡಲು ಜಮೀನು ಸಾಕಷ್ಟಿಲ್ಲದ ಕಾರಣ ಪರ್ಯಾಯ ಸ್ಥಳಗಳನ್ನು ಗುರುತಿಸಲು ಜಿಲ್ಲಾಡಳಿತವನ್ನು ದಿನಾಂಕ:03.08.2023, 21.11.2023 & 06.09.2024 ರ ಪತ್ರಗಳಲ್ಲಿ ಕೋರಲಾಗಿದೆ. ದಿನಾಂಕ:08.11.2024 ರಂದು ನಡೆದ ಸಭೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು ಜಿಲ್ಲಾಡಳಿತಕ್ಕೆ ಪರ್ಯಾಯ ಸ್ಥಳವನ್ನು ಗುರುತಿಸುವಂತೆ ಮತ್ತೊಮ್ಮೆ ಸೂಚಿಸಲಾಗಿದೆ. |
| (ಆ) | ಈ ಯೋಜನೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು? (ಸಂಪೂರ್ಣ ವಿವರ ನೀಡುವುದು) | |

ಸಂಖ್ಯೆ:ಮೂಅಇ 204 ರಾಅವಿ 2024

(ಎಂ.ಬಿ. ಪಾಟೀಲ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು